# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಲ್ಲಿಗೆ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಇವರಿಗೆ ಫಾರ್ಮ್-ಡಿ ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: 1. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:ಎಸಿಎ/ಪಿಹೆಚ್-94/2015-16, ದಿನಾಂಕ:25.05.2015.

2. ಔಷಧ ನಿಯಂತ್ರಕರ ಪತ್ರ ಸಂಖ್ಯೆ:ಔನಿಇ/40/ಯೋಜನೆ/2015-16, ದಿನಾಂಕ:20.07.2015.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖೆ:(1)ರಲ್ಲಿನ ಪತ್ರದಲ್ಲಿ ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಮಲ್ಲಿಗೆ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಇವರಿಗೆ 2015-16ನೇ ಶೈಕ್ಷಣಿಕ ಸಾಲಿನಿಂದ ಫಾರ್ಮ್-ಡಿ ಕೋರ್ಸ್‌ನ್ನು 30 ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಸರ್ಕಾರದ ಅನುಮತಿ ನೀಡುವಂತೆ ಶಿಫಾರಸು ಮಾಡಿರುತ್ತಾರೆ.

ಔಷಧ ನಿಯಂತ್ರಕರು ಮೇಲೆ ಓದಲಾದ ಕ್ರಮ ಸಂಖ್ಯೆ:(2)ರಲ್ಲಿನ ಪತ್ರದಲ್ಲಿ ಮಲ್ಲಿಗೆ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಈ ಸಂಸ್ಥೆಯು ಫಾರ್ಮ್-ಡಿ ಕೋರ್ಸ್‌ನ್ನು ಪ್ರಾರಂಭಿಸಲು ಅಗತ್ಯ ಮೂಲಭೂತ ಸೌಲಭ್ಯಗಳು ಹಾಗೂ ಬೋಧಕ ಸಿಬ್ಬಂದಿಯನ್ನು ಹೊಂದಿರುವುದರಿಂದ 2015-16ನೇ ಶೈಕ್ಷಣಿಕ ಸಾಲಿನಿಂದ ಫಾರ್ಮ್-ಡಿ ಕೋರ್ಸ್‌ನ್ನು ಪ್ರಾರಂಭಿಸಲು ಅನುಮತಿ ನೀಡಬಹುದೆಂದು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಸಚಿವರು ಸಲ್ಲಿಸಿದ ಪ್ರಸ್ತಾವನೆಯನ್ನು ಮತ್ತು ಔಷಧ ನಿಯಂತ್ರಕರ ಶಿಫಾರಸ್ಸನ್ನು ಪರಿಶೀಲಿಸಿದ ಸರ್ಕಾರವು ಮಲ್ಲಿಗೆ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಇವರಿಗೆ 2015-16ನೇ ಶೈಕ್ಷಣಿಕ ಸಾಲಿನಿಂದ ಫಾರ್ಮ್-ಡಿ ಕೋರ್ಸ್‌ನ್ನು 30 ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಅನುಮತಿ ನೀಡಲು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

## ಸರ್ಕಾರದ ಆದೇಶ ಸಂಖ್ಯೆ:ಆಕುಕ 135 ಪಿಟಿಡಿ 2015
## ಬೆಂಗಳೂರು, ದಿನಾಂಕ:05.08.2015

1994ರ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮದ 45(5)ನೇ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಮಲ್ಲಿಗೆ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಇವರಿಗೆ 2015-16 ಶೈಕ್ಷಣಿಕ ಸಾಲಿನಿಂದ ಫಾರ್ಮ್-ಡಿ ಕೋರ್ಸ್‌ನ್ನು 30 ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ ಹಾಗೂ ಸಂಯೋಜನೆ ನೀಡಲು ಶಿಫಾರಸ್ಸು ಮಾಡಲಾಗಿದೆ.

1. ಪ್ರಸ್ತಾಪಿಸಿರುವ ಕೋರ್ಸಿಗೆ ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಇವರಿಂದ ಅನುಮೋದನೆಯನ್ನು ಪಡೆದ ನಂತರವೇ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಅಂತಿಮ ಸಂಯೋಜನೆಯನ್ನು ನೀಡತಕ್ಕದ್ದು.
2. ಸಂಯೋಜನೆಯ ಬಗ್ಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮತಿ ಪಡೆಯತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
4. ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ/ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು/ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ರಾಜ್ಯ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
6. ಈ ಕಾಲೇಜುಗಳಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7. ಅನುಮೋದಿತ ಫಾರ್ಮ-ಡಿ ಕೋರ್ಸಿನ ಅನುಮೋದಿತ ಸೀಟುಗಳಲ್ಲಿ ಶೇಕಡ 50ರಷ್ಟು ಸೀಟುಗಳನ್ನು ಸರ್ಕಾರಿ ಸೀಟುಗಳಾಗಿ ಬಿಟ್ಟು ಕೊಡತಕ್ಕದ್ದು.
8. ಸರ್ಕಾರವು ಮೇಲ್ಕಂಡಂತೆ ವಿಧಿಸಿರುವ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)
(ದೂರವಾಣಿ ಸಂಖ್ಯೆ:22034292)

ಇವರಿಗೆ:

1. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4 ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು- 41.
2. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001
3. ಪ್ರಾಚಾರ್ಯರು, ಮಲ್ಲಿಗೆ ಕಾಲೇಜ್ ಆಫ್ ಫಾರ್ಮಸಿ, ನಂ.71, ಸಿಲುವೇಪುರ, ಚಿಕ್ಕಬಾಣಾವರ, ಅಂಚೆ, ಬೆಂಗಳೂರು-560 090.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
5. ಸರ್ಕಾರದ ಉಪ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
6. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.